ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ    ದಿನಾಂಕ : DATE : 18/07/2019

# ಪ್ರತ್ಯೇಕ ಆಸನಕ್ಕೆ ಸ್ಪೀಕರ್ ನಕಾರ

18/7/17

ಸಂ.ಕ. ಸಮಾಚಾರ ಬೆಂಗಳೂರು

ವಿಶ್ವಾಸ ಮತ ಯಾಚನೆ ವೇಳೆ ತಮಗೆ ಬೇರೆ ಕಡೆ ಆಸನದ ವ್ಯವಸ್ಥೆ ಮಾಡುವಂತೆ ಪಕ್ಷೇತರ ಶಾಸಕ ಆರ್. ಶಂಕರ್ ಮಾಡಿಕೊಂಡಿದ್ದ ಮನವಿಗೆ ಸ್ಪೀಕರ್ ರಮೇಶ್ ಕುಮಾರ್ ನಕಾರ ಸೂಚಿಸಿದ್ದಾರೆ.

ರಾಜ್ಯದಲ್ಲಿನ ರಾಜಕೀಯ ಚಟುವಟಿಕೆ ಸಂದರ್ಭದಲ್ಲಿ ಆರ್. ಶಂಕರ್ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಅತೃಪ್ತ ಶಾಸಕರ ಗುಂಪನ್ನು ಸೇರಿಕೊಂಡಿದ್ದರು. ತದ ನಂತರ ಜುಲೈ 15ರಂದು ಸ್ಪೀಕರ್ ಅವರಿಗೆ ಪತ್ರ ಬರೆದು ವಿಧಾನಸಭೆಯಲ್ಲಿ ತಮಗೆ ಪ್ರತಿಪಕ್ಷದ ಕಡೆ ಆಸನದ ವ್ಯವಸ್ಥೆ ಮಾಡಬೇಕು ಎಂದು ಸ್ಪೀಕರ್ ಅವರಿಗೆ ಪತ್ರ ಬರೆದಿದ್ದರು.

ಇದನ್ನು ಪರಿಶೀಲಿಸಿರುವ ಸ್ಪೀಕರ್ ರಮೇಶ್ ಕುಮಾರ್ ಅವರು ಈಗ ನಿಗದಿ ಮಾಡಿರುವ ಸ್ಥಳದಲ್ಲಿಯೇ ಆಸೀನರಾಗಬೇಕು. ಪ್ರತ್ಯೇಕ ಜಾಗವನ್ನು ನೀಡಲಾಗದು ಎಂದು ಶಾಸಕ ಶಂಕರ್‌ಗೆ ಸ್ಪಷ್ಟಪಡಿಸಿದ್ದಾರೆ ಎಂದು ಗೊತ್ತಾಗಿದೆ.

4